ಕರ್ನಾಟಕ ಸರ್ಕಾರ

ಸಂಖ್ಯೆ:ಲೋಇ 263 ಸಿಆರ್‌ಎಂ 2022(ಇ)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:23.05.2022

# ಸುತ್ತೋಲೆ

ವಿಷಯ: ಲೋಕೋಪಯೋಗಿ ಇಲಾಖೆಯಲ್ಲಿ ಟೆಂಡರ್ ಆಹ್ವಾನಿತ ಪ್ರಾಧಿಕಾರಿಯ ಕರ್ತವ್ಯ ನಿಗಧಿಗೊಳಿಸುವ ಕುರಿತು

********

ಲೋಕೋಪಯೋಗಿ ಇಲಾಖಾ ವತಿಯಿಂದ ಕೈಗೊಳ್ಳಲಾಗುವ ರಸ್ತೆ, ಸೇತುವೆ ಮತ್ತು ಕಟ್ಟಡಗಳ ನಿರ್ಮಾಣ ಹಾಗೂ ನಿರ್ವಹಣೆ ಕಾಮಗಾರಿಗಳಿಗೆ ಅರ್ಹ ಗುತ್ತಿಗೆದಾರರನ್ನು ನಿಗಧಿಪಡಿಸಲು ಕೆ.ಟಿ.ಪಿ.ಪಿ ಕಾಯ್ದೆ / ನಿಯಮಗಳನ್ವಯ ಟೆಂಡರ್ ಪ್ರಕ್ರಿಯೆ ಕೈಗೊಳ್ಳಲಾಗುತ್ತಿದೆ. ಈ ಪ್ರಕ್ರಿಯೆಗೆ ಸಂಪರ್ಕ ಮತ್ತು ಕಟ್ಟಡಗಳು, ರಾಷ್ಟ್ರೀಯ ಹೆದ್ದಾರಿ, PRAMC ವಲಯಗಳ ವ್ಯಾಪ್ತಿಯಲ್ಲಿ ಕಾರ್ಯಪಾಲಕ ಇಂಜಿನಿಯರ್‌ಗಳು, KRDCL, SHDP ವಲಯಗಳಲ್ಲಿ ಮುಖ್ಯ ಇಂಜಿನಿಯರ್‌ರವರು ಹಾಗೂ KSHIP ನಲ್ಲಿ ಯೋಜನಾಧಿಕಾರಿಯವರು ಟೆಂಡರ್ ಆಹ್ವಾನಿಸುವ ಪ್ರಾಧಿಕಾರಿಯಾಗಿರುತ್ತಾರೆ. ಇಲಾಖೆಯಿಂದ ಕೈಗೊಳ್ಳಲಾಗುವ ಕಾಮಗಾರಿಗಳಿಗೆ ಟೆಂಡರುಗಳನ್ನು ಆಹ್ವಾನಿಸಿದ ನಂತರ ಯಾವುದೇ ಟೆಂಡರ್‌ಗಳನ್ನು ಮುಂದೂಡುವ ಹಾಗೂ ರದ್ದುಪಡಿಸುವ ಕುರಿತಂತೆ ಟೆಂಡರ್ ಆಹ್ವಾನಿಸುವ ಪ್ರಾಧಿಕಾರವು ಅವರ ಹಂತದಲ್ಲಿಯೇ ನಿರ್ಧರಿಸಿ ಕ್ರಮ ಕೈಗೊಳ್ಳುತ್ತಿರುವುದು ಕಂಡು ಬರುತ್ತಿದೆ.

ಅಲ್ಲದೇ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: FD 685 Exp-12/2021, ದಿನಾಂಕ:29.11.2021 ರಲ್ಲಿ (ಪ್ರತಿ ಲಗತ್ತಿಸಿದೆ) ಕೆಟಿಪಿಪಿ ಕಾಯ್ದೆಯಡಿ ತಾಂತ್ರಿಕ ಹಾಗೂ ಆರ್ಥಿಕ ಬಿಡ್‌ಗಳನ್ನು ನಿಗಧಿತ ಸಮಯದೊಳಗೆ ಪೂರ್ಣಗೊಳಿಸುವ ನಿಟ್ಟಿನಲ್ಲಿ ಪ್ರತೀ ಚಟುವಟಿಕೆಗಳಿಗೆ Timeline ಅನ್ನು ನಿಗಧಿಪಡಿಸಿ ನೀಡಲಾಗಿರುತ್ತದೆ. ಹಾಗೂ ಈ Timeline ನಲ್ಲಿ ಯಾವುದೇ ವಿನಾಯಿತಿ ಬೇಕಾದಲ್ಲಿ ಸೂಕ್ತ ಕಾರಣಗಳೊಂದಿಗೆ ಟೆಂಡರ್ ಅಂಗೀಕಾರ ಪ್ರಾಧಿಕಾರದ ಮೇಲ್ಪಟ್ಟ ಅಧಿಕಾರಿಯ ಅನುಮೋದನೆಯನ್ನು ಪಡೆದುಕೊಳ್ಳಬೇಕಾಗಿರುತ್ತದೆ. ಆದರೆ, ಇಲಾಖೆಯಲ್ಲಿ ಈ Timeline ಅನ್ನು ಮೇಲ್ಕಂಡ ಸುತ್ತೋಲೆಯಂತೆ ನಿಗಧಿಪಡಿಸದೇ ಇರುವುದು ಕಂಡುಬರುತ್ತಿದೆ. ಈ ಹಿನ್ನೆಲೆಯಲ್ಲಿ ಈ ಕೆಳಕಂಡ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ.

1. ಟೆಂಡರ್ ಆಹ್ವಾನಿಸುವ ಪ್ರಾಧಿಕಾರಿಯು ಇ ಪ್ರೊಕ್ಯೂರ್‌ಮೆಂಟ್‌ನಲ್ಲಿ ಪ್ರಕಟಿಸುವ ಟೆಂಡರ್‌ಗಳನ್ನು ರದ್ದುಪಡಿಸುವುದು / ಮುಂದೂಡುವುದು ಮಾಡುವಂತಿಲ್ಲ. ಒಂದು ವೇಳೆ ಪ್ರಕಟಿಸಲಾದ ಟೆಂಡರ್‌ಗಳನ್ನು ರದ್ದುಪಡಿಸುವ / ಮುಂದೂಡುವ ಅವಶ್ಯಕತೆ ಕಂಡುಬಂದಲ್ಲಿ ಸಕಾರಣಗಳನ್ನು ನಮೂದಿಸಿ ತತ್‌ಕ್ಷಣದ ಮೇಲಾಧಿಕಾರಿಗಳ ಅನುಮೋದನೆ ಪಡೆದು ತದನಂತರವೇ ಕ್ರಮವಹಿಸತಕ್ಕದ್ದು.

2. ತತ್‌ಕ್ಷಣದ ಮೇಲಾಧಿಕಾರಿಗಳು ಟೆಂಡರ್ ಆಹ್ವಾನಿಸುವ ಪ್ರಾಧಿಕಾರದ ವತಿಯಿಂದ ಟೆಂಡರ್‌ಗಳನ್ನು ರದ್ದುಪಡಿಸುವ / ಮುಂದೂಡುವ ಪ್ರಸ್ತಾವನೆಗಳು ಸ್ವೀಕೃತವಾದ ಕೂಡಲೇ ಕಾರಣಗಳನ್ನು ಸೂಕ್ತವಾಗಿ ಪರಿಶೀಲಿಸಿ ತಮ್ಮ ನಿರ್ಧಾರ/ಅನುಮೋದನೆಯನ್ನು ಯಾವುದೇ ವಿಳಂಬವಿಲ್ಲದಂತೆ 24 ಗಂಟೆಯೊಳಗೆ ಟೆಂಡರ್ ಆಹ್ವಾನಿಸುವ ಪ್ರಾಧಿಕಾರಕ್ಕೆ ತಿಳಿಸತಕ್ಕದ್ದು. ಇದರಲ್ಲಿ ಯಾವುದೇ ವಿಳಂಬವಾದಲ್ಲಿ ತತ್‌ಕ್ಷಣದ ಮೇಲಾಧಿಕಾರಿಗಳು ಹೊಣೆಗಾರರಾಗುತ್ತಾರೆ.
3. ಟೆಂಡರ್ ಪ್ರಕ್ರಿಯೆಯ ಪ್ರತೀ ಚಟುವಟಿಕೆಗಳಿಗೆ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: FD 685 Exp-12/2021, ದಿನಾಂಕ:29.11.2021 ರಲ್ಲಿ ತಿಳಿಸಿರುವಂತೆ Timeline ಅನ್ನು ನಿಗಧಿಪಡಿಸತಕ್ಕದ್ದು. ಒಂದು ವೇಳೆ ಈ Timeline ನಲ್ಲಿ ಯಾವುದೇ Relaxation ಮಾಡುತ್ತಿದ್ದಲ್ಲಿ ಟೆಂಡರ್ ಅಂಗೀಕಾರ ಪ್ರಾಧಿಕಾರವು ಅವರ ಮೇಲ್ಪಟ್ಟ ಅಧಿಕಾರಿಯಿಂದ ಲಿಖಿತವಾಗಿ ಕಡ್ಡಾಯವಾಗಿ ಅನುಮೋದನೆ ಪಡೆದುಕೊಳ್ಳತಕ್ಕದ್ದು.

ಈ ಸೂಚನೆಗಳನ್ನು ಪಾಲಿಸದೇ ಇದ್ದಲ್ಲಿ ಸಂಬಂಧಪಟ್ಟ ಅಧಿಕಾರಿಯ ಮೇಲೆ ಕೆಟಿಪಿಪಿ ಕಾಯ್ದೆಯ ಸೆಕ್ಷನ್ 23 ರ ಪ್ರಕಾರ ಕ್ರಮವಹಿಸಲಾಗುವುದೆಂದು ಸೂಚಿಸಲಾಗಿದೆ.

D. Chandrakala

(ಡಿ.ಚಂದ್ರಕಲ)

ಸರ್ಕಾರದ ಅಧೀನ ಕಾರ್ಯದರ್ಶಿ,

ಲೋಕೋಪಯೋಗಿ ಇಲಾಖೆ (ಸಂಪರ್ಕ)

ಇವರಿಗೆ:

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ, 3ನೇ ಮಹಡಿ, ಸಂಪರ್ಕ ಸೌಧ, ಓರಿಯನ್ ಮಹಲ್ ಎದುರು, ರಾಜಾಜಿನಗರ, ಬೆಂಗಳೂರು
2. ಯೋಜನಾ ನಿರ್ದೇಶಕರು, ಯೋಜನಾ ಅನುಷ್ಠಾನ ಘಟಕ, ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ, ಕೆ.ಆರ್.ಸರ್ಕಲ್, ಬೆಂಗಳೂರು.
3. ಮುಖ್ಯ ಯೋಜನಾಧಿಕಾರಿ, ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ, ಕೆ.ಆರ್.ಸರ್ಕಲ್, ಬೆಂಗಳೂರು
4. ಪ್ರಧಾನ ಇಂಜಿನಿಯರ್, ಯೋಜನೆ ಮತ್ತು ರಸ್ತೆಗಳ ಆಸ್ತಿ ನಿರ್ವಹಣಾ ಕೇಂದ್ರ, ಕೆ.ಆರ್. ವೃತ್ತ, ಬೆಂಗಳೂರು
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದ), ಕೆ.ಆರ್.ಸರ್ಕಲ್, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಉತ್ತರ), ಧಾರವಾಡ
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಈಶಾನ್ಯ), ಕಲಬುರಗಿ
8. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಕೇಂದ್ರ ವಲಯ), ಶಿವಮೊಗ್ಗ
9. ಮುಖ್ಯ ಇಂಜಿನಿಯರ್, ರಾಷ್ಟ್ರೀಯ ಹೆದ್ದಾರಿ, ಕೆ.ಆರ್.ಸರ್ಕಲ್, ಬೆಂಗಳೂರು
10. ಇ-ಪ್ರೊಕ್ಯೂರ್‌ಮೆಂಟ್
11. ಎಲ್ಲಾ ಅಧೀಕ್ಷಕ ಇಂಜಿನಿಯರ್ ಗಳಿಗೆ ಸಂಬಂಧಿಸಿದ ಮುಖ್ಯ ಇಂಜಿನಿಯರ್ ಗಳ ಮುಖಾಂತರ
12. ಎಲ್ಲಾ ಕಾರ್ಯಪಾಲಕ ಇಂಜಿನಿಯರ್ ಗಳಿಗೆ ಸಂಬಂಧಿಸಿದ ಅಧೀಕ್ಷಕ ಇಂಜಿನಿಯರ್ ಗಳ ಮುಖಾಂತರ